# Akashvani: Bangalore
# Regional Bulletin In Kannada
# 16.10.2026: 14.30hrs
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

*********

**ಮುಖ್ಯಾಂಶಗಳು:**

1. ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಸಮ್ಮುಖದಲ್ಲಿ ಭಾರತೀಯ ನೌಕಾಪಡೆಗೆ ಸ್ವದೇಶಿ ನಿರ್ಮಿತ 'ಸಮರ್ಥಕ್' ಹಡಗು ಸೇರ್ಪಡೆ
2. ರಾಜ್ಯದ ನೂತನ ರಾಜ್ಯಪಾಲರಾಗಿ ಡಾ. ಸುಧಾ ಯಾದವ್ ಪ್ರಮಾಣ ವಚನ
3. ರಾಯಚೂರು ನಗರದ ಕುಡಿಯುವ ನೀರಿಗೆ ೩ ಟಿಎಂಸಿ ನೀರು ಮೀಸಲಿಡುವಂತೆ ಸಚಿವ ಡಾ. ಅಜಯ್ ಧರ್ಮಸಿಂಗ್ ಮನವಿ
4. ರಾಷ್ಟ್ರೀಯ ಏಕತಾ ದಿವಸ್ ಹಿನ್ನೆಲೆ; ಮೋಟಾರ್ ಸೈಕಲ್ ರ್‍ಯಾಲಿಗೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಚಾಲನೆ
5. ಈಶಾನ್ಯ ಮುಂಗಾರು ಚುರುಕು; ರಾಜ್ಯದ ಹಲವೆಡೆ ಇಂದು ಮಳೆ - ಹವಾಮಾನ ಇಲಾಖೆ ಮುನ್ನೆಚ್ಚರಿಕೆ

**********

ಭಾರತೀಯ ನೌಕಾಪಡೆಗೆ ಇಂದು ಸ್ವದೇಶಿ ನಿರ್ಮಿತ ಬಹುಪಯೋಗಿ ಹಡಗು 'ಸಮರ್ಥಕ್' ಸೇರ್ಪಡೆಯಾಗಿದೆ. ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಕಾರವಾರದ ಐಎನ್‌ಎಸ್ ಕದಂಬ ನೌಕಾನೆಲೆಯಲ್ಲಿ ಲೋಕಾರ್ಪಣೆಗೊಳಿಸಿದರು. ಕಾರ್ಯಕ್ರಮದಲ್ಲಿ, ನೌಕಾಪಡೆಯ ಮುಖ್ಯಸ್ಥ ಅಡ್ಮಿರಲ್ ಕೃಷ್ಣ ಸ್ವಾಮಿನಾಥನ್, ಫ್ಲಾಗ್ ಆಫಿಸರ್ ಆಫ್ ಕರ್ನಾಟಕ ವಿಕ್ರಂ ಮೆನನ್, ಸಚಿವ ಸಂತೋಷ್ ಲಾಡ್, ನೌಕಾಪಡೆ ಮತ್ತು ರಕ್ಷಣಾ ಇಲಾಖೆಯ ಅಧಿಕಾರಿಗಳು ಭಾಗಿಯಾಗಿದ್ದರು. ಎಲ್ ಅಂಡ್ ಟಿ ಕಂಪನಿಯ ಪ್ರತಿನಿಧಿಗಳು ಸಮಾರಂಭದಲ್ಲಿ ಉಪಸ್ಥಿತರಿದ್ದರು.ಕೇಂದ್ರ ಸರ್ಕಾರದ 'ಮೇಕ್ ಇನ್ ಇಂಡಿಯಾ' ಉಪಕ್ರಮದಡಿ ಎಲ್ & ಟಿ ಸಂಸ್ಥೆ ದೇಶೀಯವಾಗಿ ವಿನ್ಯಾಸಗೊಳಿಸಿ ನಿರ್ಮಿಸುತ್ತಿರುವ ನಾಲ್ಕು ಬಹು ಉದ್ದೇಶಿತ ನೌಕೆಗಳ ಪೈಕಿ ಇದು ಮೊದಲನೆಯದ್ದಾಗಿದೆ. ಈ

ನೌಕೆಯನ್ನು ಮುಖ್ಯವಾಗಿ ಸಮುದ್ರಗಸ್ತು ಮತ್ತು ಕರಾವಳಿ ನಿಗಾ ಕಾರ್ಯಗಳಿಗಾಗಿ ವಿನ್ಯಾಸಗೊಳಿಸಲಾಗಿದೆ. ಸುಮಾರು ೧೧೭ ಮೀಟರ್ ಉದ್ದ ಹಾಗೂ ೧೮.೭ ಮೀಟರ್ ಅಗಲ ಹೊಂದಿರುವ 'ಸಮರ್ಥಕ್' ೩ ಸಾವಿರದ ೭೫೦ ಟನ್‌ಗಿಂತ ಹೆಚ್ಚಿನ ಸ್ಥಳಾಂತರ ಸಾಮರ್ಥ್ಯ ಹೊಂದಿದೆ. ಗರಿಷ್ಠ ೧೫ ನಾಟ್ಸ್ ವೇಗದಲ್ಲಿ ಸಂಚರಿಸಬಲ್ಲ ಈ ನೌಕೆ, ಶೇಕಡ ೭೫ಕ್ಕಿಂತ ಹೆಚ್ಚು ಸ್ವದೇಶಿ ಅಂಶಗಳನ್ನು ಒಳಗೊಂಡಿದೆ.ಭವಿಷ್ಯದಲ್ಲಿ ನೌಕಾಪಡೆ ಬಳಸಲಿರುವ ಶಸ್ತ್ರಾಸ್ತ್ರಗಳು, ರೇಡಾರ್‌ಗಳು, ಸಂವೇದಕಗಳು ಮತ್ತು ಇತರ ತಂತ್ರಜ್ಞಾನಗಳನ್ನು ಸಮುದ್ರದಲ್ಲೇ ಪರೀಕ್ಷಿಸಲು ಇದು ಪ್ರಮುಖ ವೇದಿಕೆಯಾಗಲಿದೆ.

**********

ರಾಜ್ಯದ ನೂತನ ರಾಜ್ಯಪಾಲರಾಗಿ ಡಾ. ಸುಧಾ ಯಾದವ್ ಇಂದು ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿ ವಿಬು ಭಖ್ರು ನೂತನ ರಾಜ್ಯಪಾಲರಿಗೆ ಅಧಿಕಾರದ ಗೌಪ್ಯತಾ ಪ್ರಮಾಣ ವಚನ ಬೋಧಿಸಿದರು. ಲೋಕಭವನದ ಗಾಜಿನ ಮನೆಯಲ್ಲಿ ನಡೆದ ಐತಿಹಾಸಿಕ ಪ್ರಮಾಣ ವಚನ ಸ್ವೀಕಾರ ಸಮಾರಂಭದಲ್ಲಿ ನಿರ್ಗಮಿತ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಉಪಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ್, ಸಚಿವರಾದ ಡಾ. ಶರಣ ಪ್ರಕಾಶ್ ಪಾಟೀಲ್, ಕೆ.ಜೆ. ಜಾರ್ಜ್, ಗೃಹ ಸಚಿವ ಪ್ರಿಯಂಕ್ ಖರ್ಗೆ, ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕ ಚಲವಾದಿ ಟಿ. ನಾರಾಯಣಸ್ವಾಮಿ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ಮತ್ತು ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಪೊಲೀಸ್ ಮಹಾ ನಿರ್ದೇಶಕ ಡಾ.ಎಂ.ಎ. ಸಲೀಂ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು. ಡಾ. ಸುಧಾ ಯಾದವ್ ಕರ್ನಾಟಕದ ೨ನೇ ಮಹಿಳಾ ರಾಜ್ಯಪಾಲರಾಗಿದ್ದಾರೆ. ಈ ಹಿಂದೆ ೧೯೯೯ರಲ್ಲಿ ವಿ.ಎಸ್. ರಮಾದೇವಿ ಅವರು ರಾಜ್ಯದ ಮೊದಲ ಮಹಿಳಾ ರಾಜ್ಯಪಾಲರಾಗಿ ಸೇವೆ ಸಲ್ಲಿಸಿದ್ದರು. ಸುಧಾ ಯಾದವ್ ಐಐಟಿ ರೂರ್ಕಿಯಲ್ಲಿ ರಸಾಯನಶಾಸ್ತ್ರದಲ್ಲಿ ಎಂ.ಎಸ್ಸಿ ಪದವಿಯಲ್ಲಿ ಚಿನ್ನದ ಪದಕ ಗಳಿಸಿದ್ದು, ಪಿಎಚ್‌ಡಿ ಪದವೀಧರೆಯೂ ಆಗಿದ್ದಾರೆ.

**********

ಬೆಂಗಳೂರಿನಲ್ಲಿಂದು ಕೃಷ್ಣಾ ಮೇಲ್ದಂಡೆ ಯೋಜನೆಯ ೨೦೨೪-೨೫ನೇ ಸಾಲಿನ ನೀರಾವರಿ ಸಲಹಾ ಸಮಿತಿ ಸಭೆ ನಡೆಯಿತು. ಸಭೆಯಲ್ಲಿ ಆಲಮಟ್ಟಿ ಮತ್ತು ನಾರಾಯಣಪುರ ಜಲಾಶಯಗಳ ನೀರಿನ ಲಭ್ಯತೆ, ಮುಂಗಾರು ಅವಧಿಯ ಬಾಕಿ ನೀರು ಬಿಡುಗಡೆ ಹಾಗೂ ಬೇಸಿಗೆಯ ಕುಡಿಯುವ ನೀರಿನ ಅಗತ್ಯತೆ ಕುರಿತು ಚರ್ಚಿಸಲಾಯಿತು. ಜೇವರ್ಗಿ ವಿಧಾನಸಭಾ ಕ್ಷೇತ್ರ ಹಾಗೂ ರಾಯಚೂರು ಜಿಲ್ಲೆಯ ಕುಡಿಯುವ ನೀರಿನ ಅಗತ್ಯತೆಗೆ ವಿಶೇಷ ಆದ್ಯತೆ ನೀಡಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಧರ್ಮಸಿಂಗ್ ಒತ್ತಾಯಿಸಿದ್ದಾರೆ. ರಾಯಚೂರು ನಗರದ ಕುಡಿಯುವ ಬೇಡಿಕೆಯನ್ನು ಸಮರ್ಪಕವಾಗಿ ಪೂರೈಸಲು ಮೂರು ಟಿಎಂಸಿ ನೀರನ್ನು ಈಗಿನಿಂದಲೇ ಕಾಯ್ದಿರಿಸಬೇಕು ಎಂದು ಮನವಿ ಮಾಡಿದ್ದಾರೆ. ಹಿಂಗಾರು ಹಂಗಾಮಿಗೆ ಅಗತ್ಯವಿರುವಷ್ಟು ನೀರು ಲಭ್ಯವಿಲ್ಲದ ಕಾರಣ ಹಿಂಗಾರು ನೀರಾವರಿ ಪೂರೈಕೆ ಸಾಧ್ಯವಿಲ್ಲ ಎಂದು ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಗಿದೆ. ಕೊನೆಯಂಚಿನ ರೈತರಿಗೆ ನೀರು ತಲುಪಲು ಅನಧಿಕೃತ ನೀರು ಎತ್ತುವಿಕೆಯನ್ನು ತಡೆಯಲು ಸಂಬಂಧಪಟ್ಟ ಇಲಾಖೆಗಳ ಸಮನ್ವಯದಲ್ಲಿ ನಿಗಾವಹಿಸಲು ಸೂಚಿಸಲಾಗಿದೆ. ಸಭೆಯಲ್ಲಿ ಸಚಿವರಾದ ಎಂ.ಬಿ. ಪಾಟೀಲ್, ಡಾ. ಶರಣಪ್ರಕಾಶ್ ಪಾಟೀಲ್, ಸಂಸದ ಕುಮಾರ ನಾಯಕ್ ಸೇರಿದಂತೆ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

**********

ಮಾದಕ ದ್ರವ್ಯಗಳ ವಿರುದ್ಧದ ಹೋರಾಟವು ಯಾವುದೇ ಒಂದು ರಾಜ್ಯ ಅಥವಾ ಸರ್ಕಾರಕ್ಕೆ ಸೀಮಿತವಾದುದಲ್ಲ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅಭಿಪ್ರಾಯಪಟ್ಟಿದ್ದಾರೆ. ವಿಧಾನಸೌಧದ ಮುಂಭಾಗದಲ್ಲಿ ನಡೆದ ರಾಷ್ಟ್ರೀಯ ಏಕತಾ ದಿವಸ್-೨೦೨೪ರ ಅಂಗವಾಗಿ ರಾಜ್ಯ ಪೊಲೀಸ್ ಇಲಾಖೆ ಆಯೋಜಿಸಿರುವ ರಾಷ್ಟ್ರೀಯ ಮೋಟಾರ್ ಸೈಕಲ್ ರ‍್ಯಾಲಿಗೆ ಚಾಲನೆ ನೀಡಿ ಮಾತನಾಡಿದ ಅವರು, ಯುವಜನರ ಭವಿಷ್ಯವನ್ನು ರಕ್ಷಿಸುವುದು ಎಲ್ಲರ ಸಾಮೂಹಿಕ ಜವಾಬ್ದಾರಿ ಎಂದು ತಿಳಿಸಿದ್ದಾರೆ. ದೇಶದ ಎಲ್ಲಾ ರಾಜ್ಯಗಳಿಂದ ಆರಂಭವಾಗಲಿರುವ ಈ ರ‍್ಯಾಲಿಗಳು ಗುಜರಾತ್‌ನ ಏಕತಾ ನಗರವನ್ನು ತಲುಪಿ, ಅಲ್ಲಿ ನಡೆಯುವ ರಾಷ್ಟ್ರೀಯ ಏಕತಾ ದಿವಸ್ ಕಾರ್ಯಕ್ರಮದಲ್ಲಿ ಭಾಗವಹಿಸಲಿವೆ. ರಾಜ್ಯದ ೨೦೦ ಪೊಲೀಸ್ ಸಿಬ್ಬಂದಿ ಈ ರ‍್ಯಾಲಿಯಲ್ಲಿ ಪಾಲ್ಗೊಳ್ಳುತ್ತಿದ್ದಾರೆ.

**********

’ಜನ ಸೇವೆಯಿಂದ ದೇಶ ಸೇವೆ’ ಎಂಬ ಮಂತ್ರದಡಿ ಜನರ ಏಳಿಗೆಯ ಅಚಲ ಬದ್ಧತೆಯೊಂದಿಗೆ, ಸಾರ್ವಜನಿಕ ಸೇವೆಯ ೨೫ ವರ್ಷಗಳ ಪಯಣವನ್ನು ಪ್ರಧಾನಿ ನರೇಂದ್ರ ಮೋದಿ ಪೂರೈಸಿದ್ದಾರೆ. ಸೇವೆ ಮತ್ತು ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ, ೨೦೪೭ರ ವೇಳೆಗೆ ’ವಿಕಸಿತ ಭಾರತ’ ಗುರಿ ಸಾಧನೆಯತ್ತ ಸಾಗುತ್ತಿದೆ. ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ ’ಮೇರಾ ಯುವ ಭಾರತ್- ಮೈ ಭಾರತ್’ ಕುರಿತ ಒಂದು ವರದಿ. ಭಾರತ ಹದಿನೈದರಿಂದ ಇಪ್ಪತ್ತೊಂಬತ್ತು ವರ್ಷ ವಯಸ್ಸಿನ ಅತಿ ಹೆಚ್ಚು ಯುವ ಜನತೆಯನ್ನು ಹೊಂದಿದೆ. ಯುವ ಜನತೆಗಾಗಿ ಕೇಂದ್ರ ಸರ್ಕಾರ ’ಮೇರಾ ಯುವ ಭಾರತ್’ ಸಂಘಟನೆಯನ್ನು ೨೦೨೩ರ ಅಕ್ಟೋಬರ್‌ನಲ್ಲಿ ಸ್ವಾಯತ್ತ ಸಂಸ್ಥೆಯಾಗಿ ಸ್ಥಾಪಿಸಿತು. ಈ ಮೂಲಕ ಒಬ್ಬ ಯುವಕ ಒಮ್ಮೆ ನೋಂದಾಯಿಸಿಕೊಂಡರೆ, ಒಂದೇ ವ್ಯವಸ್ಥೆಯ ಮೂಲಕ ಕೌಶಲ್ಯ ಕಾರ್ಯಕ್ರಮಗಳು, ಸ್ವಯಂಸೇವಾ ಅವಕಾಶಗಳು, ನಾಯಕತ್ವ ತರಬೇತಿ ಮತ್ತು ಸ್ಥಳೀಯ ಅಭಿವೃದ್ಧಿ ಯೋಜನೆಗಳು ಅವರಿಗೆ ತಲುಪಲಿದೆ. ಸುಮಾರು ೨.೫ ಕೋಟಿ ಯುವ ಭಾರತೀಯರು ಈಗಾಗಲೇ ಇದರಲ್ಲಿ ಹೆಸರು ನೋಂದಾಯಿಸಿಕೊಂಡಿದ್ದಾರೆ. ಈ ಮೂಲಕ ಮೇರಾ ಯುವ ಭಾರತ ಅನ್ನು ಯುವ ಭಾಗವಹಿಸುವಿಕೆ, ನಾಯಕತ್ವ ಮತ್ತು ರಾಷ್ಟ್ರಕ್ಕೆ ಸೇವೆ ಸಲ್ಲಿಸುವ ಪ್ರಬಲ ವೇದಿಕೆಯಾಗಿ ಪರಿವರ್ತಿಸಲಾಗಿದೆ.

**********

ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ರಾಜ್ಯ ಸರ್ಕಾರ ಆರ್ಥಿಕ ಅಕ್ರಮಗಳನ್ನು ಎಸಗಿದೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. ಈ ಕುರಿತಂತೆ ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು, ಪರಿಶಿಷ್ಟ ಜಾತಿಗಳ ಕಲ್ಯಾಣಕ್ಕಾಗಿ ಮೀಸಲಾಗಿದ್ದ ೧೪ ಕೋಟಿ ೬೫ ಲಕ್ಷ ರೂಪಾಯಿಗಳನ್ನು ನಕಲಿ ಬ್ಯಾಂಕ್‌ಗಳು, ಕೃತಕ ದಾಖಲೆಗಳು ಮತ್ತು ನಿಶ್ಚಿತ ಠೇವಣಿಗಳನ್ನು ಅವಧಿಗೆ ಮುನ್ನವೇ ಮುಕ್ತಾಯಗೊಳಿಸುವ ಮೂಲಕ ದುರುಪಯೋಗ ಪಡಿಸಿಕೊಳ್ಳಲಾಗಿದೆ ಎಂದು ದೂರಿದ್ದಾರೆ. ಈ ಪ್ರಕರಣವು ರಾಜ್ಯ ಸರ್ಕಾರದ ಆಡಳಿತದಲ್ಲಿ ನಡೆದಿರುವ ಮತ್ತೊಂದು ಆರ್ಥಿಕ ವಂಚನೆಯನ್ನು ಬಯಲುಗೊಳಿಸಿದೆ ಎಂದು ತಿಳಿಸಿದ್ದಾರೆ.

**********

ಮೈಸೂರಿನಲ್ಲಿ ನಾಡಹಬ್ಬ ದಸರಾ ಸಂಭ್ರಮ ಕಳೆಗಟ್ಟಿದೆ. ರಂಗಾಚಾರ್ಲು ಪುರಭವನ ಆವರಣದಲ್ಲಿ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಹಾಗೂ ಪ್ರವಾಸೋದ್ಯಮ ಇಲಾಖೆ ವತಿಯಿಂದ ದಸರಾ ಮಹೋತ್ಸವದ ಅಂಗವಾಗಿ ಆಯೋಜಿಸಲಾಗಿದ್ದ ಪಾರಂಪರಿಕ ಸೈಕಲ್ ಸವಾರಿ ಕಾರ್ಯಕ್ರಮಕ್ಕೆ ಪುರಾತತ್ವ ಸಂಗ್ರಹಾಲಯಗಳು ಹಾಗೂ ಪರಂಪರೆ ಇಲಾಖೆಯ ಆಯುಕ್ತ ಡಾ.ಪಿ.ಶಿವರಾಜ್ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, ವಿಜಯನಗರದ ಅರಸರಿಂದ ಆರಂಭವಾದ ದಸರಾ ಸಂಸ್ಕೃತಿಯು ನಮ್ಮ ಪರಂಪರೆಯನ್ನು ಇಡೀ ಜಗತ್ತಿಗೆ ಪರಿಚಯಿಸುತ್ತಿದೆ ಎಂದು ತಿಳಿಸಿದ್ದಾರೆ. ಇನ್ನೊಂದೆಡೆ ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಆವರಣದಲ್ಲಿರುವ ಪಿ. ಕಾಳಿಂಗರಾವ್ ಸಭಾಂಗಣದಲ್ಲಿ ರಾಜ್ಯಮಟ್ಟದ ಯೋಗಾಸನ ಸ್ಪರ್ಧೆಯನ್ನು ಶಾಸಕ ಟಿ.ಎಸ್. ಶ್ರೀವತ್ಸ ಉದ್ಘಾಟಿಸಿದರು. ಇಂದು ಸಂಜೆ ೪.೩೦ಕ್ಕೆ ಯುವ ದಸರಾ ವೇದಿಕೆಯಲ್ಲಿ ಸ್ಯಾಂಡಲ್‌ವುಡ್ ನೈಟ್ಸ್ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಕಾರ್ಯಕ್ರಮದಲ್ಲಿ ಕನ್ನಡ ಚಿತ್ರರಂಗದ ಖ್ಯಾತ ಗಾಯಕರು, ಸಂಗೀತ ಕಾರ್ಯಕ್ರಮ ನಡೆಸಿಕೊಡಲಿದ್ದಾರೆ.

**********

ಮೈಸೂರಿನ ಪಿರಿಯಾಪಟ್ಟಣ ತಾಲೂಕಿನ ಕಿರನಹಳ್ಳಿ ಗೇಟ್ ಬಳಿ ಇಂದು ಬೆಳಗಿನ ಜಾವ ಖಾಸಗಿ ಸ್ಲೀಪರ್ ಕೋಚ್ ಬಸ್ ಹಾಗೂ ಲಾರಿ ನಡುವೆ ಮುಖಾಮುಖಿ ಡಿಕ್ಕಿ ಸಂಭವಿಸಿದ್ದು, ಸ್ಥಳದಲ್ಲೇ ನಾಲ್ವರು ಸಾವನ್ನಪ್ಪಿದ್ದಾರೆ. ಅಪಘಾತದಲ್ಲಿ ಇಪ್ಪತ್ತಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ. ಮೈಸೂರಿನಿಂದ ಕೇರಳದತ್ತ ತೆರಳುತ್ತಿದ್ದ ಖಾಸಗಿ ಸ್ಲೀಪರ್ ಕೋಚ್ ಬಸ್ ಹಾಗೂ ಪಿರಿಯಾಪಟ್ಟಣದಿಂದ ಮೈಸೂರು ಮಾರ್ಗವಾಗಿ ಸಾಗುತ್ತಿದ್ದ ಲಾರಿ ನಡುವೆ ಈ ಅಪಘಾತ ಸಂಭವಿಸಿದೆ. ಅಪಘಾತದಲ್ಲಿ ಗಾಯಗೊಂಡ ಇಪ್ಪತ್ತಕ್ಕೂ ಹೆಚ್ಚು ಮಂದಿಯನ್ನು ಪಿರಿಯಾಪಟ್ಟಣ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಅಪಘಾತ ಸಂಬಂಧ ಪಿರಿಯಾಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ಮುಂದುವರೆಸಿದ್ದಾರೆ.

**********

ರಾಜ್ಯದಲ್ಲಿ ಈಶಾನ್ಯ ಮುಂಗಾರು ಮಳೆ ಆರಂಭಗೊಂಡಿದೆ. ಇಂದು ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ ಜಿಲ್ಲೆಗಳಲ್ಲಿ ಗುಡುಗು ಸಹಿತ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ. ಕರ್ನಾಟಕದ ಉತ್ತರ ಒಳನಾಡು ಜಿಲ್ಲೆಗಳಾದ ರಾಯಚೂರು, ಗದಗ, ಕೊಪ್ಪಳ ಮತ್ತು ಹಾವೇರಿ ಜಿಲ್ಲೆಗಳ ಒಂದೆರಡು ಕಡೆ, ಗುಡುಗು, ಬಿರುಗಾಳಿ ಸಹಿತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ದಕ್ಷಿಣ ಒಳನಾಡು ಜಿಲ್ಲೆಗಳಾದ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಕೋಲಾರ, ಚಾಮರಾಜನಗರ, ಕೊಡಗು, ಮಂಡ್ಯ ಜಿಲ್ಲೆಗಳ ಹಲವೆಡೆ ಗುಡುಗು ಸಹಿತ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ.

**********

**ಸಂಕ್ಷಿಪ್ತ ಸುದ್ದಿ**

೧. ನಾಡಹಬ್ಬ ದಸರಾ ಮಹೋತ್ಸವದ ಸಂಭ್ರಮ ಹೆಚ್ಚಿಸಲು ದಸರಾ ಗಜಪಡೆ ಶಿವಮೊಗ್ಗ ನಗರಕ್ಕೆ ಆಗಮಿಸಿದೆ. ಮಹಾನಗರ ಪಾಲಿಕೆ ಅಧಿಕಾರಿಗಳು ಆನೆಗಳಿಗೆ ಆತ್ಮೀಯ ಸ್ವಾಗತ ಕೋರಿದರು.

೨. ವಿಧಾನ ಪರಿಷತ್ ದ್ವೈವಾರ್ಷಿಕ ಚುನಾವಣೆ ಹಿನ್ನೆಲೆಯಲ್ಲಿ, ಮುಕ್ತ, ನ್ಯಾಯಸಮ್ಮತ ಹಾಗೂ ಶಾಂತಿಯುತ ಮತದಾನವನ್ನು ಖಾತರಿಪಡಿಸುವ ಉದ್ದೇಶದಿಂದ ದಾವಣಗೆರೆ ಮಹಾನಗರ ಪಾಲಿಕೆ, ದಾವಣಗೆರೆ ಹಾಗೂ ಜಗಳೂರು ತಾಲ್ಲೂಕು ವ್ಯಾಪ್ತಿಯಲ್ಲಿ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ನಿಷೇಧಾಜ್ಞೆ ಜಾರಿಗೊಳಿಸಿ ಆದೇಶ ಹೊರಡಿಸಿದ್ದಾರೆ.

**********